ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ21/ಬಿ16/7228/85-86 (Vol-III) ದಿನಾಂಕ : 10 MAR 2022
ಲಗತ್ತು: 2 ಹಾಳೆಗಳು

## ಸುತ್ತೋಲೆ

ವಿಷಯ: ನಿಗಮದ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ ದೂರುಗಳ (Anonymous complaints) ಕುರಿತು.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 21 ಸೇಇವಿ 2019 ದಿನಾಂಕ 03.10.2019.
2. ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 15 ಸೇಇವಿ 2021 ದಿನಾಂಕ 05.03.2021

----

ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ಹಾಗೂ ಪೂರ್ಣವಿಳಾಸವಿಲ್ಲದ ದೂರು ಅರ್ಜಿಗಳನ್ನು ಕಡತಗೊಳಿಸಲು ಮತ್ತು ವಿಳಾಸ ಸಹಿತವಿರುವ ದೂರು ಅರ್ಜಿಗಳು ಸ್ವೀಕೃತವಾದಾಗ ದೂರು ನೀಡಿರುವ ವ್ಯಕ್ತಿಯ ಹೆಸರು ಮತ್ತು ವಿಳಾಸವನ್ನು ಖಚಿತಪಡಿಸಿಕೊಂಡು ಅರ್ಜಿದಾರ/ದೂರುದಾರ ಅಗತ್ಯ ಪೂರಕ ದಾಖಲೆಗಳನ್ನು ಒದಗಿಸಿದ ನಂತರ ಆರೋಪವು ಮೇಲ್ನೋಟಕ್ಕೆ ಕಂಡುಬಂದಲ್ಲಿ ಅಂತಹ ದೂರು ಅರ್ಜಿಗಳನ್ನು ಮಾತ್ರ ಪ್ರಾಥಮಿಕ ತನಿಖೆಗೆ/ವಿಚಾರಣೆಗೆ ಪರಿಗಣಿಸಬೇಕೆಂದು ಸೂಚಿಸಿರುವ ಸರ್ಕಾರದ ಉಲ್ಲೇಖದ ದಿನಾಂಕ 03.10.2019 ಮತ್ತು 05.03.2021 ರ ಸುತ್ತೋಲೆಗಳನ್ನು ಈ ಮೂಲಕ ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಕವಿಪ್ರನಿನಿ ಹಾಗು ಎಸ್ಕಾಂಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ದೂರು ಅರ್ಜಿಗಳ ವಿಲೇವಾರಿಯಲ್ಲಿ ಸರ್ಕಾರವು ಮೇಲಿನ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

'ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ
ರವರಿಂದ ಅನುಮೋದಿಸಲ್ಪಟ್ಟಿದೆ'

ನಿರ್ದೇಶಕರು (ಆ ಮತ್ತು ಮಾ.ಸಂ)
ಕವಿಪ್ರನಿನಿ

ಪ್ರತಿಗಳು:

1. ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂಗಳು / ಪಿಸಿಕೆಎಲ್
2. ಎಲ್ಲಾ ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ.ಅ), ಎಸ್ಕಾಂಗಳು.
3. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಸ್ಕಾಂಗಳು.
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ / ಎಸ್ಕಾಂಗಳು.

6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/(ಪ್ರಸರಣ)/(ಆ ಮತ್ತು ಮಾ.ಸಂ), ಕವಿಪ್ರನಿನಿ ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ http://kptcl.karnataka.gov.in -> eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ**

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ನಿಯಂತ್ರಣಾಧಿಕಾರಿ, ಕವಿಪ್ರನಿನಿ / ಎಸ್ಕಾಂಗಳು
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ಉಪ ಲೆಕ್ಕಾಧಿಕಾರಿ, ಕವಿಪ್ರನಿನಿ / ಎಸ್ಕಾಂಗಳು
3. ಎಲ್ಲಾ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು / ಎಲ್ಲಾ ಲೆಕ್ಕಾಧಿಕಾರಿಗಳು (ಆಂ.ಪ.), ಕವಿಪ್ರನಿನಿ / ಎಸ್ಕಾಂಗಳು

**ಪ್ರತಿಗಳು ಮಾಹಿತಿಗಾಗಿ**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ (ನೋ.ಸಂ. 659) ಹಾಗು ನಿರ್ದೇಶಕರು, ಕವಿಪ್ರನಿನಿ ಮತ್ತು ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗು ನಿರ್ದೇಶಕರು, ಕವಿಪ್ರನಿನಿ ಮತ್ತು ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಕಲ್ಯಾಣ ಸಂಘ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ / ಎಸ್ಕಾಂಗಳು ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 21 ಸೇಇವಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 03.10.2019.

## ಸುತ್ತೋಲೆ

**ವಿಷಯ:** ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ ಕ್ರಮ.

**ಉಲ್ಲೇಖ:**
1. ಸುತ್ತೋಲೆ ಸಂಖ್ಯೆ: ಜಿಎಡಿ 113 ಒಒಎಂ 62, ದಿನಾಂಕ: 26.10.1962.
2. ಭಾರತ ಸರ್ಕಾರದ ಡಿ.ಓ.ಪಿ.ಟಿ ಅಧಿಕೃತ ಜ್ಞಾಪನ ಸಂಖ್ಯೆ:104/76/2011-AVD.1, ದಿನಾಂಕ:18.10.2013

****

1. ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ದೂರುಗಳ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿತ ಸುತ್ತೋಲೆಯಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ. ಇಂತಹ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿರುತ್ತವೆ. ಅಲ್ಲದೇ, ದೂರುಗಳಿಗೆ ಪೂರಕವಾದ ಮಾಹಿತಿ/ದಾಖಲೆಗಳನ್ನು ಸಾಮಾನ್ಯವಾಗಿ ಲಭ್ಯವಿಡಿಸಿರುವುದಿಲ್ಲ. ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರ ದೈನಂದಿನ ಕೆಲಸ ಕಾರ್ಯಗಳಲ್ಲಿ ಹಸ್ತಕ್ಷೇಪ ಉಂಟಾಗುವುದಲ್ಲದೇ ದಕ್ಷ ಹಾಗೂ ಪ್ರಮಾಣಿಕ ನೌಕರರ ವಿಶ್ವಾಸರ್ಹತೆಗೆ ಧಕ್ಕೆ ಉಂಟಾಗುತ್ತದೆ ಹಾಗೂ ಅವರು ಮುಕ್ತ ಮತ್ತು ನಿರ್ಭೀತರಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ.

2. ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 04.08.2019ರ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಈ ಸಂಬಂಧ ನೀಡಿರುವ ಮನವಿಯನ್ನು ಪರಿಗಣಿಸಿ, ಕೇಂದ್ರ ಸರ್ಕಾರದ ಮಾದರಿಯಂತೆಯೇ ರಾಜ್ಯದಲ್ಲಿ ಸರ್ಕಾರಿ ನೌಕರರ ವಿರುದ್ಧ ಅನಾಮಧೇಯ ದೂರು/ಪತ್ರಗಳ ಆಧಾರದ ಮೇಲೆ ತನಿಖೆಗೆ ಒಳಪಡಿಸದೆ, ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ ಪರಿಗಣಿಸಲು ಆದೇಶ ಹೊರಡಿಸುವಂತೆ ಸೂಚಿಸಿರುತ್ತಾರೆ.

..2

Scanned with CamScanner

3. ಮೇಲ್ಕಾಣಿಸಿದ ಅಂಶಗಳ ಹಾಗೂ ಭಾರತ ಸರ್ಕಾರದ ಉಲ್ಲೇಖ-2ರ ಅಧಿಕೃತ ಜ್ಞಾಪನದ ಹಿನ್ನೆಲೆಯಲ್ಲಿ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ಅರ್ಜಿಗಳ ಆಧಾರದ ಮೇಲೆ ಪ್ರಕರಣವನ್ನು ತನಿಖೆಗೆ/ವಿಚಾರಣೆಗೆ ಒಳಪಡಿಸದೇ ಅಂತಹ ದೂರು ಅರ್ಜಿಗಳನ್ನು ಕಡತಗೊಳಿಸಬೇಕೆಂದು ಸೂಚಿಸಿದೆ.

4. ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆಗೆ ಪರಿಗಣಿಸಲು ಸಚಿವಾಲಯದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ. ಈ ಅಂಶವನ್ನು ಸಂಬಂಧಪಟ್ಟ ಇಲಾಖೆಗಳು ತಮ್ಮ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

**(ತ.ಮ. ವಿಜಯ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ.
3. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110011.
4. ಎಲ್ಲಾ ಇಲಾಖಾ ಮುಖ್ಯಸ್ಥರು.
5. ಎಲ್ಲಾ ಪ್ರಾದೇಶಿಕ ಆಯುಕ್ತರು.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
7. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು
9. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 15 ಸೇಇವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:05.03.2021.

**ಸುತ್ತೋಲೆ**

ವಿಷಯ: ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ.

ಉಲ್ಲೇಖ: 1. ಸುತ್ತೋಲೆ ಸಂಖ್ಯೆ: ಸಿಆಸುಇ 21 ಸೇಇವಿ 2019, ದಿನಾಂಕ:03.10.2019.
2. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ ಇ - 2306163/2021, ದಿನಾಂಕ:20.02.2021

*****

ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿದ್ದು, ಪೂರಕ ಮಾಹಿತಿ/ದಾಖಲೆಗಳನ್ನು ಲಭ್ಯವಾಗಿಸದಿರುವುದರಿಂದ ಹಾಗೂ ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರು ದೈನಂದಿನ ಕೆಲಸ ಕಾರ್ಯಗಳನ್ನು ಮುಕ್ತ ಹಾಗೂ ನಿರ್ಭೀತರಾಗಿ ಕೆಲಸ ನಿರ್ವಹಿಸಲು ತೊಂದರೆಯಾಗುತ್ತಿರುವುದನ್ನು ಗಮನಿಸಿ, ಇಂತಹ ಅನಾಮಧೇಯ ಅರ್ಜಿಗಳನ್ನು ತನಿಖೆ/ವಿಚಾರಣೆಗೆ ಒಳಪಡಿಸದೇ ಕಡತಗೊಳಿಸುವಂತೆ ಹಾಗೂ ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆಗೆ ಪರಿಗಣಿಸುವಂತೆ ಉಲ್ಲೇಖ (1) ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಮೇಲ್ಕಂಡ ಸುತ್ತೋಲೆಯಲ್ಲಿನ ಸೂಚನೆಯನ್ನು ದುರುಪಯೋಗಪಡಿಸಿಕೊಂಡು ಅನೇಕರು ನಕಲಿ ಹೆಸರು ಮತ್ತು ನಕಲಿ ವಿಳಾಸವನ್ನು ಬಳಸಿಕೊಂಡು ರಾಜ್ಯ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ದೂರುಗಳನ್ನು ನೀಡಿ ನೌಕರರನ್ನು ಅನಗತ್ಯವಾಗಿ ತನಿಖೆಗೆ ಒಳಪಡಿಸುವಂತೆ ಮಾಡುತ್ತಿರುವುದನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದಿರುತ್ತದೆ. ಇಂತಹ ಪ್ರಸಂಗಗಳನ್ನು ತಡೆಹಿಡಿಯಲು ಅಗತ್ಯ ಸೂಚನೆಗಳನ್ನು ಹೊರಡಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಉಲ್ಲೇಖ (2)ರ ಟಿಪ್ಪಣಿಯಲ್ಲಿ ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಪೂರ್ಣ ವಿಳಾಸ ಸಹಿತವಿರುವ ದೂರುಗಳು ಸ್ವೀಕೃತವಾದಾಗ, ದೂರು ನೀಡಿರುವ ವ್ಯಕ್ತಿಯ ಹೆಸರು ಮತ್ತು ವಿಳಾಸವನ್ನು ಖಚಿತಪಡಿಸಿಕೊಂಡು ಅರ್ಜಿದಾರ/ದೂರುದಾರ ಅಗತ್ಯ ಪೂರಕ ದಾಖಲೆಗಳನ್ನು ಒದಗಿಸಿದ ನಂತರ ದೂರುದಾರರ ಆರೋಪವು ಮೇಲ್ನೋಟಕ್ಕೆ ಕಂಡುಬಂದಲ್ಲಿ ಅಂತಹ ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ಮಾತ್ರ ಪ್ರಾಥಮಿಕ ತನಿಖೆಗೆ/ವಿಚಾರಣೆಗೆ ಪರಿಗಣಿಸಲು ಆದೇಶಿಸುವಂತೆ ಸೂಚಿಸಲಾಗಿದೆ.

ಈ ಸೂಚನೆಗಳನ್ನು ಸಚಿವಾಲಯದ ಎಲ್ಲಾ ಇಲಾಖಾ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರು ತಮ್ಮ ವ್ಯಾಪ್ತಿಯಲ್ಲಿ ಒಳಪಡುವ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ:

ಸಂಕಲನಕಾರರು, ಕರ್ನಾಟಕ ಇ-ರಾಜ್ಯಪತ್ರ

ಪ್ರತಿಯನ್ನು:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು
2. ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ.
3. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110011.
4. ಎಲ್ಲಾ ಇಲಾಖಾ ಮುಖ್ಯಸ್ಥರು.
5. ಎಲ್ಲಾ ಪ್ರಾದೇಶಿಕ ಆಯುಕ್ತರು.
6. ಎಲ್ಲಾ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
7. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು